ದಿ : 07-01-2026 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಭೋಧಿಸಲಾಯಿತು.

ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿದೆ. ಸದರಿ ಪ್ರಮಾಣಪತ್ರವನ್ನು ತಯಾರಿಸಲು ವಕೀಲರಿಗೆ ನಾನೇ ಮಾಹಿತಿ ನೀಡಿದ್ದೇನೆ. ಅದರಲ್ಲಿರುವ ಅಂಶಗಳನ್ನು ನಾನು ಓದಿ ತಿಳಿದುಕೊಂಡಿರುತ್ತೇನೆ.

ಮುಂದುವರಿದ ಮುಖ್ಯ ವಿಚಾರಣೆ:- ವಾದಿ ಪರ ವಕೀಲರಾದ ಶ್ರೀ ಎಮ್. ಜೆ.ಎಸ್. ರವರಿಂದ

1) ದಾವಾ ಜಮೀನುಗಳಿಗೆ ಸಂಬಂಧಿಸಿದ ಒಟ್ಟು 6 ಗಣಕೀಕೃತ ಪಹಣಿ ಪತ್ರಿಕೆಗಳು
2) ಗೇಣಿ ಹಕ್ಕಿನ ಮಂಜೂರಾತಿಗಾಗಿ ಸಲ್ಲಿಸಿದ ಅರ್ಜಿಯ ದೃಢೀಕೃತ ನಕಲುಗಳು
3) ಭೂ ನ್ಯಾಯ ಮಂಡಳಿಯ ಆದೇಶದ ದೃಢೀಕೃತ ನಕಲು
4) ನಮೂನೆ-10 ರ ದೃಢೀಕೃತ ನಕಲು
5 ದಾವಾ ಆಸ್ತಿಗಳ ಕೇಲವು ಭಾಗ ಭೂಸ್ವಾಧೀನವಾದ ಬಗ್ಗೆ ನಮಗೆ ಕಳುಹಿಸಿದ 3 ನೋಟಿಸುಗಳನ್ನು ಹಾಜರು ಮಾಡಿದ್ದೇನೆ.

ಸದರಿ ದಾಖಲೆಗಳನ್ನು ಕ್ರಮವಾಗಿ ನಿ.ಪಿ - 1 ರಿಂದ 12 ಎಂದು ಗುರುತಿಸಲಾಯಿತು.

ಆದ್ದರಿಂದ ಅರ್ಜಿಯನ್ನು ಪುರಸ್ಕರಿಸಲು ಕೋರಿರುತ್ತೇನೆ.

ಪಾಟೀ ಸವಾಲು : ಪ್ರತಿವಾದಿಗಳ ಪರ ವಕೀಲರ ಕೋರಿಕೆಯ ಮೇರೆಗೆ ಸಾಕ್ಷಿ ಪಾಟೀ ಸವಾಲನ್ನು ಮುಂದುಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ

ಹಿರಿಯ ಸಿವಿಲ್ ನ್ಯಾಯಾಧೀಶರು
ಕುಂದಾಪುರ